/VishwavaniNews epaper.vishwavani.news/ vishwavani.news
ಬೆಂಗಳೂರು • ಮಂಗಳೂರು • ಕಲಬುರಗಿ • ಬೆಳಗಾವಿ • ಹುಬ್ಬಳ್ಳಿ • ದಾವಣಗೆರೆ
ವಿಶ್ವವಾಣಿ
ವಿಶ್ವಾಸವೇ ವಿಶ್ವ

# ಕೊಟ್ಟ ಮಾತಂತೆ ನಡೆದ ನಾಯಕ ಮೋದಿ

**ಧಾರವಾಡ:** ಧಾರವಾಡ ಐಐಟಿಗೆ ಪ್ರಧಾನಿ ನರೇಂದ್ರ ಮೋದಿ ಅವರೇ ಶಂಕು ಸ್ಥಾಪನೆ ನೆರವೇರಿಸಿದ್ದರು. ಅಂದು ನಾನೇ ಉದ್ಘಾಟನೆ ಮಾಡುವುದಾಗಿ ಮಾತು ಕೊಟ್ಟಿದ್ದರು. ಮಾತಿಗೆ ತಕ್ಕಂತೆ ಇಂದು ಅವರು ಬಂದಿದ್ದಾರೆ. ಬೇರೆಯವರು ತಮ್ಮ ಕೆಲಸ ಎಂದು ಜಾಹೀರಾತು ಕೊಡುತ್ತಿದ್ದಾರೆ. ಆದರೆ, ನರೇಂದ್ರ ಮೋದಿ ಅವರಿಂದ ಐಐಟಿ ಸಾಧ್ಯವಾಗಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಹೇಳಿದರು.

ಮಂಡ್ಯದಲ್ಲಿ ಬೆಂಗಳೂರು-ಮೈಸೂರು ಹೆದ್ದಾರಿ ಉದ್ಘಾಟಿಸಿ ಪ್ರಧಾನಿ ನರೇಂದ್ರ ಮೋದಿ ಅವರುಧಾರವಾಡಕ್ಕೆ ಆಗಮಿಸಿದರು. ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅವರು ಸ್ವಾಗತ ಭಾಷಣದಲ್ಲಿ ಹಿಂದಿ ಭಾಷೆಯಲ್ಲೇ ಪ್ರಧಾನಿ ನರೇಂದ್ರ ಮೋದಿ ಅವರನ್ನು ಸ್ವಾಗತಿಸಿದರು. ಭ್ರಷ್ಟಾಚಾರದಿಂದ ಮುಳುಗಿ ಹೋಗಿದ್ದ ಭಾರತಕ್ಕೆ ಹೊಸ ಯೋಜನೆಗಳನ್ನು ಕೊಟ್ಟವರು ಪ್ರಧಾನಿ ನರೇಂದ್ರ ಮೋದಿ ಎಂದು ಹೊಗಳಿದರು.

ಹುಬ್ಬಳ್ಳಿ ರೈಲ್ವೆ ನಿಲ್ದಾಣಕ್ಕೆ ಸಿದ್ಧಾರೂಢ ಹೆಸರಿಟ್ಟು, ಬೆಂಗಳೂರು ರೈಲ್ವೆ ನಿಲ್ದಾಣಕ್ಕೆ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನ ಹೆಸರಿಟ್ಟವರು ಮೋದಿ ಮತ್ತು ಬಿಜೆಪಿ ಸರಕಾರ. ಹಿಂದಿನ ಸರಕಾರ ಬಡತನದ ಬಗ್ಗೆ ಘೋಷಣೆಗಳನ್ನು ಕೂಗಿದರು. ಬಡವರನ್ನು ಸಶಕ್ತಗೊಳಿಸುವ, ಮಹಿಳೆಯರನ್ನು ಸಬಲೀಕರಣಗೊಳಿಸುವಂತಹ ಯೋಜನೆಗಳನ್ನು ರೂಪಿಸಿದವರು ಪ್ರಧಾನಿ ಮೋದಿ ಎಂದು ಶ್ಲಾಘಿಸಿದರು.



ಪ್ರಧಾನಿ ನರೇಂದ್ರ ಮೋದಿ ಅವರನ್ನು ಸನ್ಮಾನಿಸಿದ ರಾಜ್ಯ ನಾಯಕರು.

ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಮಾತನಾಡಿ, ಉತ್ತರ ಕರ್ನಾಟದಕ ಸಮಗ್ರ ಅಭಿವೃದ್ಧಿಗೆ ಮೋದಿ ಅವರ ಸರಕಾರ ಸಕಲವನ್ನೂ ನೀಡಿದೆ. ಅಮೃತಕಾಲದ ಮುಂದಿನ ಜನಾಂಗವನ್ನು ರೂಪಿಸುವಲ್ಲಿ ನಾಯಕ ನರೇಂದ್ರ ಮೋದಿ ಅವರು ಪ್ರಮುಖ ಪಾತ್ರವಹಿಸಿದ್ದಾರೆ ಎಂದು ಹೇಳಿದರು.

ಸಮಾವೇಶದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಪ್ರಲ್ಹಾದ್ ಜೋಶಿ ಸೇರಿದಂತೆ ಅನೇಕ ಗಣ್ಯರು ಸನ್ಮಾನಿಸಿ ಗೌರವಿಸಿದರು. ಧಾರವಾಡದ ಕಸೂತಿ ಶಾಲು, ಧಾರವಾಡ ಪೇಡ, ಸಿದ್ಧಾರೂಢರ ಮೂರ್ತಿ, ಕಲಘಟಗಿ ಬಣ್ಣದ ತೊಟ್ಟಿಲು, ಹಾವೇರಿಯ ಏಲಕ್ಕಿ ಪೇಟ ತೊಡಿಸಿ ಸನ್ಮಾನಿಸಲಾಯಿತು.

**ಇಷ್ಟು ದೊಡ್ಡ ಸಂಖ್ಯೆಯಲ್ಲಿ ನಾಯಕರನ್ನು ಆಶೀರ್ವಾದ ಮಾಡಲು ಜನರು ಸೇರಿದ್ದನ್ನು ನಾನು 35 ವರ್ಷದ ರಾಜಕೀಯ ಜೀವನದಲ್ಲಿ ಈವರೆಗೂ ಕಂಡಿರಲಿಲ್ಲ. ರೈಲ್ವೆ ಹಳಿಗಳ ಎಲೆಕ್ಟ್ರಿಫಿಕೇಷನ್ ಈ ಕಾಲಘಟ್ಟದಲ್ಲಿ ಆಗುತ್ತಿದೆ. ರೈಲ್ವೆಗೆ, ಅದರಲ್ಲೂ ಕರ್ನಾಟಕಕ್ಕೆ ಅತಿ ಹೆಚ್ಚು ಮೊತ್ತವನ್ನು ಕೇಂದ್ರ ಸರಕಾರವು ಕೊಟ್ಟಿದೆ. ಇದು ಡಬಲ್ ಎಂಜಿನ್ ಸರಕಾರದ ತಾಕತ್ತು ಮತ್ತು ಧಮ್.**

**-ಬಸವರಾಜ ಬೊಮ್ಮಾಯಿ, ಮುಖ್ಯಮಂತ್ರಿ**

/VishwavaniNews epaper.vishwavani.news/ vishwavani.news
ಬೆಂಗಳೂರು • ಮಂಗಳೂರು • ಕಲಬುರಗಿ • ಬೆಳಗಾವಿ • ಹುಬ್ಬಳ್ಳಿ • ದಾವಣಗೆರೆ
ವಿಶ್ವವಾಣಿ
ವಿಶ್ವಾಸವೇ ವಿಶ್ವ

ಈ ರೀತಿಯ ನಡೆ ದೇಶಕ್ಕೆ, ಜನರಿಗೆ ಮಾಡಿದ ಅಪಮಾನ | ಧಾರವಾಡದಲ್ಲಿ ಐಐಟಿ ಕ್ಯಾಂಪಸ್ ಉದ್ಘಾಟಿಸಿದ ನಂತ ಮಾತನಾಡಿದ ಪಿಎಂ

# ಲಂಡನ್‌ನಲ್ಲಿ ನಿಂತು ಭಾರತದ ಪ್ರಜಾಪ್ರಭುತ್ವದ ಬಗ್ಗೆ ಟೀಕೆ

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ಭಾರತ ಕೇವಲ ಅತಿದೊಡ್ಡ ಪ್ರಜಾಪ್ರಭುತ್ವ ದೇಶವಲ್ಲ, ಬದಲಿಗೆ ಪ್ರಜಾಪ್ರಭುತ್ವದ ತವರಿದ್ದಂತೆ. ಆದರೆ ಇಂತಹ ಪ್ರಜಾಪ್ರಭುತ್ವದ ಬಗ್ಗೆ ಲಂಡನ್ ನೆಲದಲ್ಲಿ ನಿಂತು ಮಾತನಾಡುವುದು ದೇಶಕ್ಕೆ ಮಾಡುವ ಅಪಮಾನ ಎಂದು ಪ್ರಧಾನಿ ನರೇಂದ್ರ ಮೋದಿ ಅವರು ರಾಹುಲ್ ಗಾಂಧಿ ವಿರುದ್ಧ ಪರೋಕ್ಷವಾಗಿ ವಾಗ್ದಾಳಿ ನಡೆಸಿದರು.

ಧಾರವಾಡದಲ್ಲಿ ನೂತನವಾಗಿ ನಿರ್ಮಾಣವಾಗಿರುವ ಐಐಟಿ ಕ್ಯಾಂಪಸ್ ಉದ್ಘಾಟನೆ ಸೇರಿದಂತೆ ವಿವಿಧ ಯೋಜನೆಗಳ ಉದ್ಘಾಟನೆಯ ಬಳಿಕ ಮಾತನಾಡಿದ ಅವರು, ಬಸವೇಶ್ವರರ ಅನುಭವ ಮಂಟಪವನ್ನು ಸ್ಮರಿಸಿ, ಭಾರತವನ್ನು ಪ್ರಜಾಪ್ರಭುತ್ವದ ತಾಯಿ. ಲಂಡನ್‌ನಲ್ಲಿ ಬಸವೇಶ್ವರರ ಪ್ರತಿಮೆ ಅನಾವರಣವನ್ನು ನೆನಪಿಸಿಕೊಂಡ ಪ್ರಧಾನಿಯವರು, ಲಂಡನ್‌ನಲ್ಲೇ ಭಾರತದ ಪ್ರಜಾಪ್ರಭುತ್ವವನ್ನು ಪ್ರಶ್ನೆ ಮಾಡಲಾಯಿತು. ಭಾರತದ ಮಹಾನ್ ಪರಂಪರೆ, ಭಾರತದ ಅವಮಾನವನ್ನು ಲಂಡನ್‌ನಲ್ಲಿ ಮಾಡಲಾಗಿದೆ. ಕರ್ನಾಟಕದ ಜನತೆ ಇಂತಹ ಜನರ ವಿಚಾರದಲ್ಲಿ ಎಚ್ಚರಿಕೆಯಿಂದ ಇರಬೇಕು ಎಂದು ಟೀಕಿಸಿದರು.

ಧಾರವಾಡದಲ್ಲಿ ನಾಲ್ಕೇ ವರ್ಷಗಳಲ್ಲಿ ಐಐಟಿ ಕ್ಯಾಂಪಸ್ ಸಿದ್ಧವಾಗಿದೆ. ಶಿಲಾನ್ಯಾಸ ನಾವೇ ಮಾಡುತ್ತೇವೆ. ಉದ್ಘಾಟನೆಯನ್ನೂ ಮಾಡ್ತೇವೆ. ಶಿಲಾನ್ಯಾಸ ಮಾಡಿ ನಾವು ಮರೆತು ಹೋಗೋದಿಲ್ಲ, ಉತ್ತಮ ಶಿಕ್ಷಣ ಸಂಸ್ಥೆಗಳ ವಿಸ್ತರಣೆ ಮಾಡಿದರೆ ಬ್ರ್ಯಾಂಡ್‌ಗೆ ಹಾನಿಯಾಗುತ್ತೆ ಎಂಬ ಭಾವನೆ ಇತ್ತು. ಆದರೆ ಇಂದು ನಾವು ಹಳೆಯ ಈ ಯೋಚನೆಯನ್ನು ಹಿಮ್ಮೆಟ್ಟಿ ನಡೆಯುತ್ತಿದ್ದೇವೆ. ಉತ್ತಮ ಶಿಕ್ಷಣ ಕೊಡುವ ಸಂಸ್ಥೆಗಳು ಹೆಚ್ಚಾಗಬೇಕು, ಎಲ್ಲರಿಗೂ ಒಳ್ಳೆಯ ಶಿಕ್ಷಣ ಸಿಗಬೇಕು ಎಂದರು.



ಕಳೆದ ಒಂಬತ್ತು ವರ್ಷಗಳಲ್ಲಿ ಅತ್ಯುತ್ತಮ ಶಿಕ್ಷಣ ಸಂಸ್ಥೆಗಳ ಸಂಖ್ಯೆ ಹೆಚ್ಚುತ್ತಿದೆ. ಏಮ್ಸ್‌ಗಳ ಸಂಖ್ಯೆ ಮೂರು ಪಟ್ಟು ಹೆಚ್ಚಾಗಿದೆ. ಐಐಎಂ ಹಾಗೂ ಐಐಟಿಗಳ ಸಂಖ್ಯೆ ದೇಶದಲ್ಲಿ ಹೆಚ್ಚುತ್ತಿದೆ. ಸಿದ್ಧಾರೂಢ ಸ್ವಾಮೀಜಿ ರೈಲ್ವೆ ನಿಲ್ದಾಣದ ಪ್ಲಾಟ್‌ಫಾರ್ಮ್ ಇಡೀ ವಿಶ್ವದ ಅತಿ ದೊಡ್ಡ ಪ್ಲಾಟ್‌ಫಾರ್ಮ್, ಇದು ನಮ್ಮ ಮೂಲಸೌಕರ್ಯ ಅಭಿವೃದ್ಧಿಯ ಚಿಂತನೆಯ ಫಲ ಎಂದರು.

**ಡೀಸೆಲ್ ಅವಲಂಬನೆ ಕಡಿಮೆ ಮಾಡಬೇಕು**

ರೈಲ್ವೆಯಲ್ಲಿ ಡೀಸೆಲ್ ಮೇಲಿನ ಅವಲಂಬನೆ ಕಡಿಮೆ ಮಾಡಲು ಸರ್ವ ಕ್ರಮ ಉತ್ತಮ ರಸ್ತೆ, ಆಸ್ಪತ್ರೆಗಳ ಅಭಿವೃದ್ಧಿಗೆ ಡಬಲ್ ಎಂಜಿನ್ ಸರಕಾರದಿಂದ ಸರ್ವ ಕ್ರಮವಹಿಸಲಾಗಿದೆ. ಬೆಂಗಳೂರಿನಿಂದ ಬೆಳಗಾವಿವರೆಗೆ, ಕಲಬುರಗಿಯಿಂದ ಶಿವಮೊಗ್ಗದವರೆಗೆ ಹಲವೆಡೆ ನಾನು ಭೇಟಿ ನೀಡಿದ್ದೇನೆ. ನಿಮ್ಮ ಋಣವನ್ನು ತೀರಿಸಲು ನಾನು ಅದಷ್ಟೂ ನಿಮ್ಮ ಸೇವೆ ಮಾಡುತ್ತೇನೆ. ಬಿಜೆಪಿಯ ಡಬಲ್ ಎಂಜಿನ್ ಸರಕಾರವು ಕರ್ನಾಟಕದ ಪ್ರತಿ ಜಿಲ್ಲೆ, ಪ್ರತಿ ಗ್ರಾಮದ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಶ್ರಮಿಸುತ್ತಿದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ, ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಮಾಜಿ ಮುಖ್ಯಮಂತ್ರಿ ಜಗದೀಶ ಶೆಟ್ಟರ್ ಸೇರಿದಂತೆ ಅನೇಕರಿದ್ದರು.

## ಯಾವೆಲ್ಲಾ ಯೋಜನೆಗೆ ಚಾಲನೆ ಹಾಗೂ ಶಂಕುಸ್ಥಾಪನೆ?

- **ಧಾರವಾಡ ಐಐಟಿ**

410 ಎಕರೆ ವಿಸ್ತೀರ್ಣದ ವಿಶಾಲ ನಿವೇಶನದಲ್ಲಿ ,852 ಕೋಟಿ ರೂ.ಯೋಜನಾ ವೆಚ್ಚದಲ್ಲಿ ಸ್ಥಾಪನೆಯಾಗಿರುವ ಧಾರವಾಡ ಭಾರತೀಯ ತಂತ್ರಜ್ಞಾನ ಸಂಸ್ಥೆ (ಐಐಟಿ) ಮೊದಲ ಹಂತದ ಕಟ್ಟಡದ ಉದ್ಘಾಟನೆ. ಪ್ರಸ್ತುತ ಈ ಸಂಸ್ಥೆಯಲ್ಲಿ 73 ಬೋಧಕರು,35 ಸಿಬ್ಬಂದಿ ಹಾಗೂ 856 ವಿದ್ಯಾರ್ಥಿಗಳಿದ್ದಾರೆ. ಬಿ-ಟೆಕ್,ಬಿಎಸ್, ಎಂಎಸ್,ಎಂ ಟೆಕ್ ಹಾಗೂ ಪಿ.ಎಚ್‌ಡಿ ಪದವಿಗಳು ಲಭ್ಯ.

- **ವಿಶ್ವದ ಅತಿ ಉದ್ದನೆಯ ರೈಲ್ವೇ ಪ್ಲಾಟ್ ಫಾರ್ಮ್**

ಹುಬ್ಬಳ್ಳಿಯ ಶ್ರೀ ಸಿದ್ಧಾರೂಢ ಸ್ವಾಮಿ ರೈಲ್ವೇ ನಿಲ್ದಾಣದಲ್ಲಿ 20 ಕೋಟಿ ರು.ವೆಚ್ಚದಲ್ಲಿ ನಿರ್ಮಾಣವಾಗಿರುವ ಹಾದುಹೋಗಿ ಕೆಳಸೇತುವೆ ಹಾಗೂ 1507 ಮೀ.ಉದ್ದದ ವಿಶ್ವದ ಅತಿ ಉದ್ದನೆಯ ರೈಲ್ವೇ ಫ್ಲಾಟ್ ಫಾರ್ಮ್ ಉದ್ಘಾಟನೆ.

- **ಹೊಸಪೇಟೆ-ಹುಬ್ಬಳ್ಳಿ-ತಿನೈಘಾಟ್ ರೈಲ್ವೇ ಮಾರ್ಗದ ವಿದ್ಯುದೀಕರಣ**

ವಿಜಯನಗರ, ಕೊಪ್ಪಳ, ಗದಗ , ಧಾರವಾಡ, ಉತ್ತರ ಕನ್ನಡ ಹಾಗೂ ಬೆಳಗಾವಿ ಜಿಲ್ಲೆಗಳ ಮೂಲಕ ಹಾಯ್ದು ಹೋಗುವ 245 ರೈಲ್ವೇ ಕಿ.ಮೀ.ಉದ್ದದ ಹೊಸಪೇಟೆ- ಹುಬ್ಬಳ್ಳಿ-ತಿನೈಘಾಟ್ ರೈಲ್ವೇ ಮಾರ್ಗದ ವಿದ್ಯುದೀಕರಣ ಕಾಮಗಾರಿ 519 ಕೋಟಿ ರು.ವೆಚ್ಚದಲ್ಲಿ ಪೂರ್ಣಗೊಂಡಿದೆ. 13 ಕೋಟಿ ವೆಚ್ಚದಲ್ಲಿ ಉನ್ನತೀಕರಣಗೊಂಡಿರುವ ಹೊಸಪೇಟೆ ರೈಲ್ವೇ ನಿಲ್ದಾಣ ಲೋಕಾರ್ಪಣೆ.

- **353 ಕೋಟಿ ವೆಚ್ಚದ ಸ್ಮಾರ್ಟ್ ಸಿಟಿ ಯೋಜನೆಗಳು**

ನಾಗರಿಕರ ಜೀವನ ಮಟ್ಟ ಸುಧಾರಣೆಗೆ ಹುಬ್ಬಳ್ಳಿ ಧಾರವಾಡ ಸ್ಮಾರ್ಟ್ ಸಿಟಿ ಯೋಜನೆಯಡಿ 353 ಕೋಟಿ ರು. ವೆಚ್ಚದಲ್ಲಿ ವಿವಿಧ ಯೋಜನೆಗಳ ಉದ್ಘಾಟನೆ.

**ಶಂಕುಸ್ಥಾಪನೆಗೊಂಡ ಕಾರ್ಯಕ್ರಮಗಳು**

- **ಜಲಜೀವನ ಮಿಷನ್ ಬಹುಗ್ರಾಮ ಕುಡಿಯುವ ನೀರು ಯೋಜನೆ. 1042 ಕೋಟಿ ವೆಚ್ಚದಲ್ಲಿ 86** ಎಂಎಲ್‌ಡಿ ನೀರು ಸಂಸ್ಕರಣಾ ಘಟಕ ನಿರ್ಮಾಣ. ಮಲಪ್ರಭಾ ನದಿಯ ರೇಣುಕಾಸಾಗರ ಜಲಾಶಯದಿಂದ 2 ಲಕ್ಷ ಮನೆಗಳಿಗೆ ಶುದ್ಧೀಕರಿಸಿದ ಕುಡಿಯುವ ನೀರು ಸರಬರಾಜು. ಜಿಲ್ಲೆಯ 396 ಗ್ರಾಮೀಣ ವಸತಿ ಪ್ರದೇಶಗಳು ಹಾಗೂ ಒಂದು ಪಟ್ಟಣಕ್ಕೆ ಸುಸ್ಥಿರ ಹಾಗೂ ಶುದ್ಧ ಕುಡಿಯುವ ನೀರು ಪೂರೈಕೆ ಯೋಜನೆಗೆ ಶಂಕುಸ್ಥಾಪನೆ .
- **ಹುಬ್ಬಳ್ಳಿ ಧಾರವಾಡ ಸ್ಮಾರ್ಟ್ ಸಿಟಿ** ಯೋಜನೆಯಡಿ 166 ಕೋಟಿ ರೂ.ವೆಚ್ಚದಲ್ಲಿ ಕ್ರೀಡಾ ಸಂಕೀರ್ಣಕ್ಕೆ ಶಂಕುಸ್ಥಾಪನೆ.
- ಹುಬ್ಬಳ್ಳಿಯ ರಾಯನಾಳ ಬಳಿ 11 .36 ಎಕರೆ ಪ್ರದೇಶದಲ್ಲಿ,250 ಕೋಟಿ ರು.ವೆಚ್ಚದಲ್ಲಿ ಜಯದೇವ ಹೃದ್ರೋಗಗಳ ಆಸ್ಪತ್ರೆಯ ಪ್ರಾದೇಶಿಕ ಕೇಂದ್ರ ಸ್ಥಾಪನೆಗೆ ಶಂಕುಸ್ಥಾಪನೆ.
- 150 ಕೋಟಿ ವೆಚ್ಚದಲ್ಲಿ ತುಪ್ಪರಿಹಳ್ಳ ಪ್ರವಾಹ ಹಾನಿ ತಡೆಯಲು, ಆಯ್ದ ಭಾಗಗಳಲ್ಲಿ ತಡೆಗೋಡೆ ಹಾಗೂ ವಡ್ಡುಗಳನ್ನು ನಿರ್ಮಾಣಕ್ಕೆ ಚಾಲನೆ.